Akashvani: Bangalore
National Bulletin In Kannada
10.05.2025 : 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

*******

ಮುಖ್ಯಾಂಶಗಳು:

- ಭಾರತ - ಪಾಕಿಸ್ತಾನ ಅಂತಾರಾಷ್ಟ್ರೀಯ ಗಡಿ ಹಾಗೂ ನಿಯಂತ್ರಣರೇಖೆಯ ಬಳಿ ೨೬ ಸ್ಥಳಗಳಲ್ಲಿ ಡ್ರೋನ್ ಪತ್ತೆ; ಭಾರತೀಯ ಸೇನೆಯಿಂದ ತೀವ್ರ ನಿಗಾ
- ಮೂರು ಸಶಸ್ತ್ರ ಪಡೆಗಳ ಸೇನಾ ಮುಖ್ಯಸ್ಥರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಉನ್ನತ ಮಟ್ಟದ ಸಭೆ
- ಪಾಕಿಸ್ತಾನಕ್ಕೆ ಐಎಂಎಫ್ ಆರ್ಥಿಕ ನೆರವು ನೀಡುವ ಮತದಾನದಿಂದ ದೂರ ಉಳಿದ ಭಾರತ
- ಇದೇ ೧೪ರ ವರೆಗೆ ೩೨ ವಿಮಾನ ನಿಲ್ದಾಣಗಳ ನಾಗರಿಕ ವಿಮಾನ ಕಾರ್ಯಾಚರಣೆ ಸ್ಥಗಿತಗೊಳಿಸಿದ ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ
- ಯಾವುದೇ ಸಂಭವನೀಯ ಬಿಕ್ಕಟ್ಟ ಎದುರಿಸಲು ಸಿದ್ಧರಿರುವಂತೆ ಬ್ಯಾಂಕ್‌ಗಳಿಗೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಸೂಚನೆ

**********

ಬಾರಾಮುಲ್ಲಾದಿಂದ ಭುಜ್‌ವರೆಗಿನ ಅಂತಾರಾಷ್ಟ್ರೀಯ ಗಡಿ ಮತ್ತು ನಿಯಂತ್ರಣರೇಖೆ ಬಳಿ ೨೬ ಸ್ಥಳಗಳಲ್ಲಿ ಡ್ರೋನ್‌ಗಳು ಕಾಣಿಸಿಕೊಂಡಿವೆ. ಈ ಡ್ರೋನ್‌ಗಳು ನಾಗರಿಕರು ಮತ್ತು ಮಿಲಿಟರಿ ಗುರಿಗಳಿಗೆ ಸಂಭಾವ್ಯ ಬೆದರಿಕೆಯನ್ನುಂಟು ಮಾಡುವ ಶಂಕಿತ ಸಶಸ್ತ್ರ ಡ್ರೋನ್‌ಗಳನ್ನು ಒಳಗೊಂಡಿವೆ. ರಕ್ಷಣಾ ಮೂಲಗಳ ಪ್ರಕಾರ, ಬಾರಾಮುಲ್ಲಾ, ಶ್ರೀನಗರ, ಅವಂತಿಪೋರಾ, ನಾಗ್ರೋಟಾ, ಜಮ್ಮು, ಫಿರೋಜ್‌ಪುರ, ಪಠಾಣ್‌ಕೋಟ್, ಫಜಿಲ್ಕಾ, ಲಾಲ್‌ಗಢ್ ಜಟ್ಟಾ, ಜೈಸಲ್ಮೇರ್, ಬಾರ್ಮರ್, ಭುಜ್, ಕುವಾರ್ಬೆಟ್ ಮತ್ತು ಲಖಿ ನಲಾದಲ್ಲಿ ಡ್ರೋನ್‌ಗಳು ಪತ್ತೆಯಾಗಿವೆ.

ಭಾರತೀಯ ಸಶಸ್ತ್ರ ಪಡೆಗಳು ಹೆಚ್ಚಿನ ಜಾಗರೂಕತೆಯನ್ನು ಕಾಯ್ದುಕೊಂಡಿವೆ ಮತ್ತು ಅಂತಹ ಎಲ್ಲಾ ವೈಮಾನಿಕ ಬೆದರಿಕೆಗಳನ್ನು ಪ್ರತಿ-ಡ್ರೋನ್ ವ್ಯವಸ್ಥೆಗಳನ್ನು ಬಳಸಿಕೊಂಡು ಪತ್ತೆಹಚ್ಚಲಾಗುತ್ತಿದೆ. ಪರಿಸ್ಥಿತಿಯನ್ನು ನಿರಂತರ ಕಣ್ಗಾವಲಿನಲ್ಲಿ ಇರಿಸಲಾಗಿದೆ ಮತ್ತು ಅಗತ್ಯವಿರುವಲ್ಲಿ ತ್ವರಿತ ಕ್ರಮ ಕೈಗೊಳ್ಳಲಾಗುತ್ತಿದೆ. ಗಡಿ ಪ್ರದೇಶಗಳಲ್ಲಿ ವಾಸಿಸುವ ನಾಗರಿಕರಿಗೆ ಮನೆಗಳಿಂದ ಹೊರಬರದಂತೆ ಅಥವಾ ಅನಗತ್ಯ ಓಡಾಟ ಮಿತಿಗೊಳಿಸಲು ಮತ್ತು ಸ್ಥಳೀಯ ಅಧಿಕಾರಿಗಳು ನೀಡುವ ಸುರಕ್ಷತಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ. ಫಿರೋಜ್‌ಪುರ, ಅಮೃತಸರ ಮತ್ತು ಪಠಾಣ್‌ಕೋಟ್ ಸೇರಿದಂತೆ ಪಂಜಾಬ್‌ನ ಗಡಿ ಜಿಲ್ಲೆಗಳ ಮೇಲೆ ದಾಳಿ ಮಾಡಲು ಸಶಸ್ತ್ರ ಡ್ರೋನ್‌ಗಳು ಪ್ರಯತ್ನಿಸಿದವು ಎಂದು ನಮ್ಮ ವರದಿಗಾರರು ವರದಿ ಮಾಡಿದ್ದಾರೆ, ಆದರೆ ಭಾರತೀಯ ರಕ್ಷಣಾ ಪಡೆಗಳು ಆ ಪ್ರಯತ್ನಗಳನ್ನು ಯಶಸ್ವಿಯಾಗಿ ಹಿಮ್ಮೆಟ್ಟಿಸಿ ವಿಫಲಗೊಳಿಸಿದವು. ಆದಾಗ್ಯೂ, ಫಿರೋಜ್‌ಪುರದಲ್ಲಿ, ಒಂದು ಮನೆಗೆ ಹಾನಿಯಾಗಿದೆ ಮತ್ತು ದಾಳಿಯಿಂದಾಗಿ ಮೂವರು ಕುಟುಂಬ ಸದಸ್ಯರು ಗಾಯಗೊಂಡಿದ್ದಾರೆ. ಅವರಿಗೆ ಸುಟ್ಟ ಗಾಯಗಳಾಗಿದ್ದು, ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ವರದಿಯಾಗಿದೆ. ಫಿರೋಜ್‌ಪುರ ಪೊಲೀಸ್ ಮುಖ್ಯಸ್ಥ ಭೂಪಿಂದರ್ ಸಿಂಗ್ ಸಿಧು ಅವರ ಪ್ರಕಾರ, ಇದು ಒಂದು ಪ್ರತ್ಯೇಕ ಘಟನೆಯಾಗಿದ್ದು, ಹೆಚ್ಚಿನ ದಾಳಿಗಳನ್ನು ಸೇನೆಯು ಪರಿಣಾಮಕಾರಿಯಾಗಿ ಎದುರಿಸಿದೆ. ಈ ನಡುವೆ, ಜಮ್ಮು ಮತ್ತು ಕಾಶ್ಮೀರದ ಶ್ರೀನಗರ ನಗರ ಮತ್ತು ಜಮ್ಮುವಿನ ಅಖ್ನೂರ್ ಪ್ರದೇಶದಲ್ಲಿ ಇಂದು ಭಾರಿ ಸ್ಫೋಟದಂತಹ ಶಬ್ದಗಳು ಕೇಳಿಬಂದಿವೆ. ಪಾಕಿಸ್ತಾನ ಸೇನೆಯು ಪೂಂಚ್ ಮತ್ತು ರಾಜೌರಿ ಜಿಲ್ಲೆಗಳಲ್ಲಿನ ನಾಗರಿಕ ಪ್ರದೇಶಗಳ ಮೇಲೆ ರಾತ್ರಿಯಿಡೀ ಗುಂಡು ಹಾರಿಸಿ ಭಾರಿ ಹಾನಿಯನ್ನುಂಟುಮಾಡಿದೆ.

**********

ಭಾರತ ಪಾಕಿಸ್ತಾನ ನಡುವಿನ ಉದ್ವಿಗ್ನತೆ ಹೆಚ್ಚುತ್ತಿರುವ ಸಂದರ್ಭದಲ್ಲಿ ನವದೆಹಲಿಯಲ್ಲಿ ನಿನ್ನೆ ಪ್ರಧಾನಿ ನರೇಂದ್ರ ಮೋದಿ ಭೂಸೇನೆ, ವಾಯುಪಡೆ ಮತ್ತು ನೌಕಾಪಡೆಯ ಸೇನಾ ಮುಖ್ಯಸ್ಥರೊಂದಿಗೆ ಉನ್ನತಮಟ್ಟದ ಸಭೆ ನಡೆಸಿದರು. ಈ ವೇಳೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮತ್ತು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಸಭೆಯಲ್ಲಿ ಪಾಲ್ಗೊಂಡಿದ್ದರು.

**********

ಪಾಕಿಸ್ತಾನ ನಿನ್ನೆ ರಾತ್ರಿ ಸುಮಾರು ೪೦೦ ಡ್ರೋನ್‌ಗಳನ್ನು ಬಳಸಿಕೊಂಡು ಲೇಹ್‌ನಿಂದ ಸಿರ್‌ಕ್ರೀಕ್‌ವರೆಗಿನ ೩೬ ಸ್ಥಳಗಳಲ್ಲಿ ದಾಳಿ ನಡೆಸಲು ಪ್ರಯತ್ನಿಸಿತ್ತು. ಭಾರತೀಯ ಸಶಸ್ತ್ರ ಪಡೆಗಳು ಹಲವು ವಿಧಗಳಿಂದ ಈ ಡ್ರೋನ್‌ಗಳನ್ನು ಹೊಡೆದುರುಳಿಸಿದವು ಎಂದು ಭಾರತೀಯ ಸೇನೆಯ ಕರ್ನಲ್ ಸೋಫಿಯಾ ಖುರೇಷಿ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ನಡೆದ ವಿಶೇಷ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಮಿಲಿಟರಿ ಮೂಲಸೌಕರ್ಯವನ್ನು ಗುರಿಯಾಗಿಸುವ ಉದ್ದೇಶದಿಂದ ಪಾಕ್ ಸೇನೆಯು, ಭಾರತದ ಇಡೀ ಪಶ್ಚಿಮ ಗಡಿಯಲ್ಲಿ ಭಾರತೀಯ ವಾಯುಪ್ರದೇಶವನ್ನು ಹಲವಾರು ಬಾರಿ ಉಲ್ಲಂಘಿಸಿದೆ. ಅಲ್ಲದೇ, ನಿಯಂತ್ರಣ ರೇಖೆಯ ಉದ್ದಕ್ಕೂ ಭಾರೀ ಶಸ್ತ್ರಾಸ್ತ್ರಗಳಿಂದ ದಾಳಿ ನಡೆಸಿದೆ ಎಂದು ಹೇಳಿದರು. ಡ್ರೋನ್‌ಗಳ ಅವಶೇಷಗಳನ್ನು ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಆರಂಭಿಕ ಮಾಹಿತಿಯ ಪ್ರಕಾರ, ಅವು ಟರ್ಕಿಶ್ ಆಸಿಸ್‌ಗಾರ್ಡ್ ಸೊಂಗಾರ್ ಡ್ರೋನ್‌ಗಳಾಗಿವೆ ಎಂದು ಕರ್ನಲ್ ಸೋಫಿಯಾ ಖುರೇಷಿ ಮಾಹಿತಿ ನೀಡಿದ್ದಾರೆ.ಭಾರತೀಯ ವಾಯುಸೇನೆಯ ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಮಾತನಾಡಿ, ಪಾಕಿಸ್ತಾನದ ದಾಳಿಗೆ ಪ್ರತಿಯಾಗಿ, ಭಾರತೀಯ ಸಶಸ್ತ್ರ ಡ್ರೋನ್‌ಗಳ ಮೂಲಕ ಪಾಕಿಸ್ತಾನದ ನಾಲ್ಕು ವಾಯು ರಕ್ಷಣಾ ಪ್ರದೇಶಗಳ ಮೇಲೆ ದಾಳಿ ನಡೆಸಲಾಯಿತು. ಡ್ರೋನ್‌ಗಳ ಮೂಲಕ ಪಾಕಿಸ್ತಾನದ ಒಂದು ಎಡಿ ರಾಡಾರ್ ಅನ್ನು ನಾಶಮಾಡಲಾಗಿದೆ ಎಂದು ವಿವರಿಸಿದರು.

****ಧ್ವನಿ **** ವ್ಯೋಮಿಕಾ ಸಿಂಗ್

ಬಳಿಕ ಮಾತನಾಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ತಾನು ನಡೆಸಿದ ದಾಳಿಗಳನ್ನು ಪಾಕಿಸ್ತಾನ ನಿರಾಕರಿಸಿರುವುದು ಅದರ ದ್ವಂದ್ವ ನೀತಿಯ ನಿದರ್ಶನವಾಗಿದೆ. ಗುರುದ್ವಾರಗಳು, ಕಾನ್ವೆಂಟ್‌ಗಳು ಮತ್ತು ದೇವಾಲಯಗಳನ್ನು ಗುರಿಯಾಗಿಸಿಕೊಂಡು ಶೆಲ್ ದಾಳಿ ನಡೆಸಿರುವುದು ಹೇಯ ಕೃತ್ಯ ಎಂದರು. ಬಹವಲ್‌ಪುರದಲ್ಲಿರುವ ಜೈಶ್ ಎ ಮೊಹಮ್ಮದ್ ಪ್ರಧಾನ ಕಚೇರಿಯ ಮೇಲಿನ ದಾಳಿ ವಾಲ್ ಸ್ಟ್ರೀಟ್ ಜನರಲ್ ಪತ್ರಕರ್ತ ಡೆನಿಯಲ್ ಪರ್ಲ್ ಅವರ ಕ್ರೂರ ಹತ್ಯೆಗೆ ಸೂಕ್ತ ಪ್ರತಿಕ್ರಿಯೆಯಾಗಿದೆ.

ಪ್ರಸ್ತುತ ಸ್ಥಿತಿಗತಿಗಳನ್ನು ಗಮನದಲ್ಲಿಟ್ಟುಕೊಂಡು ಮುಂದಿನ ನಿರ್ದೇಶನದ ವರೆಗೆ ಕರ್ತಾರ್‌ಪುರ್ ಸಾಹಿಬ್ ಕಾರಿಡಾರ್‌ನ ಸೇವೆಗಳನ್ನು ಸ್ಥಗಿತಗೊಳಿಸಲಾಗಿದೆ ಎಂದು ಮಾಹಿತಿ ನೀಡಿದರು.

**********

ಪಾಕಿಸ್ತಾನಕ್ಕೆ ಹೊಸದಾಗಿ ಆರ್ಥಿಕ ನೆರವು ಒದಗಿಸುವ ಕುರಿತಂತೆ ನಡೆದ ಅಂತಾರಾಷ್ಟ್ರೀಯ ಹಣಕಾಸು ನಿಧಿ - ಐಎಂಎಫ್ ಮಂಡಳಿ ಸಭೆಯಲ್ಲಿ ಮತ ಚಲಾಯಿಸುವುದರಿಂದ ಭಾರತ ದೂರ ಉಳಿದಿದೆ. ಈ ಕುರಿತಂತೆ ಭಾರತದ ಹೇಳಿಕೆಯನ್ನು ಐಎಂಎಫ್ ಸ್ವೀಕರಿಸಿದೆ. ಪಾಕಿಸ್ತಾನದ ಹಿಂದಿನ ಆರ್ಥಿಕ ದಾಖಲೆಯನ್ನು ಗಮನದಲ್ಲಿಟ್ಟುಕೊಂಡು ಅಲ್ಲಿ ಐಎಂಎಫ್ ಕಾರ್ಯಕ್ರಮಗಳ ಪರಿಣಾಮಕಾರಿತ್ವವನ್ನು ಭಾರತ ಪ್ರಶ್ನಿಸಿದೆ. ಇದರ ಜೊತೆಗೆ ಐಎಂಎಫ್ ನೀಡುವ ಧನ ಸಹಾಯವನ್ನು ಪಾಕಿಸ್ತಾನ ಗಡಿಯಾಚೆಗಿನ ಭಯೋತ್ಪಾದನೆಗೆ ಬಳಸುವ ಸಾಧ್ಯತೆಗಳ ಬಗ್ಗೆ ಆತಂಕವ್ಯಕ್ತಪಡಿಸಿದೆ. ಐಎಂಎಫ್ ನಿನ್ನೆ ಪಾಕಿಸ್ತಾನಕ್ಕೆ ನೀಡಲಾಗುತ್ತಿರುವ ಒಂದು ಶತಕೋಟಿ ಡಾಲರ್ ವಿಸ್ತರಿತ ನಿಧಿ ಸೌಲಭ್ಯ ಮತ್ತು ೧.೩ ಶತಕೋಟಿ ಡಾಲರ್ ಸ್ಥಿರತೆ ಮತ್ತು ಸುಸ್ಥಿರತೆ ಸೌಲಭ್ಯ ಕುರಿತಂತೆ ಪರಿಶೀಲನೆ ನಡೆಸಿತು. ಸಭೆಯಲ್ಲಿ ಭಾರತ ಸ್ಪಷ್ಟ ಹೇಳಿಕೆ ನೀಡಿದ್ದು, ಗಡಿಯಾಚೆಗಿನ ಭಯೋತ್ಪಾದನೆಗೆ ನಿರಂತರ ಬೆಂಬಲ ನೀಡುವ ದೇಶಕ್ಕೆ ಮರಳಿ ಆರ್ಥಿಕ ನೆರವು ನೀಡುವುದು ಅಂತಾರಾಷ್ಟ್ರೀಯ ಸಮುದಾಯಕ್ಕೆ ಅಪಾಯಕಾರಿ ಸಂದೇಶ ನೀಡುತ್ತದೆ. ಇದರಿಂದ ಜಾಗತಿಕ ಮೌಲ್ಯಗಳಿಗೆ ಅವಮಾನವಾಗುವ ಜೊತೆಗೆ ಹಣಕಾಸು ಸಂಸ್ಥೆಗಳು ಹಾಗೂ ದಾನಿಗಳಿಗೆ ಅಗೌರವ ತೋರಿದಂತಾಗುತ್ತದೆ. ದೀರ್ಘಕಾಲದಿಂದ ಐಎಂಎಫ್‌ನಿಂದ ನೆರವು ಪಡೆಯುತ್ತಿರುವ ಪಾಕಿಸ್ತಾನ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಜಾರಿಗೆ ತರಲು ವಿಫಲವಾಗಿದೆ. ಕಳೆದ ೫ ವರ್ಷಗಳಲ್ಲಿ ಐಎಂಎಫ್, ಪಾಕಿಸ್ತಾನದಲ್ಲಿ ನಾಲ್ಕು ಕಾರ್ಯಕ್ರಮಗಳನ್ನು ಜಾರಿಗೊಳಿಸಿದರೂ ಪ್ರಯೋಜನವಾಗಿಲ್ಲ ಎಂದು ಭಾರತ ಅಭಿಪ್ರಾಯಪಟ್ಟಿದೆ.

**********

ಪಾಕಿಸ್ತಾನ ಇಂದು ಮಧ್ಯಾಹ್ನ ೧೨ ಗಂಟೆಯವರೆಗೆ ತನ್ನ ವಾಯು ಪ್ರದೇಶದಲ್ಲಿ ವಿಮಾನ ಸಂಚಾರವನ್ನು ಸ್ಥಗಿತಗೊಳಿಸಿದೆ.

ಪೇಶಾವರಕ್ಕೆ ಹೋಗುವ ಪಾಕಿಸ್ತಾನ ವಿಮಾನಯಾನ ಸಂಸ್ಥೆಯ ಪಿಐಎ-೨೧೮ ವಿಮಾನವನ್ನು ಬಲೂಚಿಸ್ತಾನದ ಕ್ವೆಟ್ಟಾ ಮೇಲಿನಿಂದ ಹಾರಾಟ ನಡೆಸುವಂತೆ ಸೂಚಿಸಲಾಯಿತು. ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ ಕೂಡ ಈ ತಿಂಗಳ ೧೪ರ ವರೆಗೆ ಉತ್ತರ ಮತ್ತು ಪಶ್ಚಿಮ ಭಾರತದಾದ್ಯಂತ ೩೨ ವಿಮಾನ ನಿಲ್ದಾಣಗಳನ್ನು ಎಲ್ಲಾ ನಾಗರಿಕ ವಿಮಾನ ಕಾರ್ಯಾಚರಣೆಗಳಿಗೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸುವುದಾಗಿ ಘೋಷಿಸಿದೆ. ಅಮೃತ್‌ಸರ್, ಚಂಡಿಗಢ, ಜಮ್ಮು, ಶ್ರೀನಗರ, ಭುಜ್, ಜಾಮ್‌ನಗರ್, ಜೈಸಲ್ಮೇರ್, ಪಠಾಣ್‌ಕೋಟ್ ಸೇರಿದಂತೆ ಒಟ್ಟು ೩೨ ವಿಮಾನ ನಿಲ್ದಾಣಗಳ ಕಾರ್ಯಾಚರಣೆ ಮೇಲೆ ನಿರ್ಬಂಧ ತರಲಾಗಿದೆ.

**********

ದ್ವಿಪಕ್ಷೀಯ ವ್ಯಾಪಾರ ಮತ್ತು ಹೂಡಿಕೆಯಲ್ಲಿನ ಸಹಕಾರ ಉತ್ತೇಜಿಸಲು ಪ್ರಮುಖ ಹೆಜ್ಜೆಯಾಗಿ ಭಾರತ, ನ್ಯೂಜಿಲೆಂಡ್ ಮುಕ್ತ ವ್ಯಾಪಾರ ಒಪ್ಪಂದದ ಮೊದಲ ಸುತ್ತಿನ ಮಾತುಕತೆಗಳು ನವದೆಹಲಿಯಲ್ಲಿ ನಿನ್ನೆ ಯಶಸ್ವಿಯಾಗಿ ಸಂಪನ್ನಗೊಂಡಿದೆ. ಉಭಯ ಪಾಲುದಾರರ ನಡುವೆ ನಡೆದ ವರ್ಚುವಲ್ ಚರ್ಚೆಗಳ ಸರಣಿಯ ನಂತರ ಮೊದಲ ಸುತ್ತಿನ ಮಾತುಕತೆ ನಡೆಯಿತು ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ.

**********

ಬ್ಯಾಂಕಿಂಗ್ ಮತ್ತು ಹಣಕಾಸು ಸೇವೆಗಳಿಗೆ ತಡೆರಹಿತ ಪ್ರವೇಶ ಖಚಿತಪಡಿಸುವ ನಿಟ್ಟಿನಲ್ಲಿ ಎಲ್ಲಾ ಬ್ಯಾಂಕ್‌ಗಳು ಸಂಪೂರ್ಣವಾಗಿ ಜಾಗರೂಕರಾಗಿದ್ದು, ಯಾವುದೇ ಸಂಭವನೀಯ ಬಿಕ್ಕಟ್ಟನ್ನು ಎದುರಿಸಲು ಸಿದ್ಧರಾಗಿರಬೇಕು ಎಂದು ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಬ್ಯಾಂಕ್‌ಗಳಿಗೆ ಸೂಚನೆ ನೀಡಿದ್ದಾರೆ. ಸಾರ್ವಜನಿಕ ಮತ್ತು ಖಾಸಗಿ ವಲಯದ ಬ್ಯಾಂಕ್‌ಗಳು ಮತ್ತು ವಿಮಾ ಕಂಪನಿಗಳ ವ್ಯವಸ್ಥಾಪಕ ನಿರ್ದೇಶಕರು ಮತ್ತು ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಮಾತನಾಡಿದ ಅವರು, ಯಾವುದೇ ಸವಾಲಿನ ಸಮಯದಲ್ಲಿ ಆರ್ಥಿಕ ಸ್ಥಿರತೆ ಖಚಿತಪಡಿಸಿಕೊಳ್ಳುವಲ್ಲಿ ಬ್ಯಾಂಕಿಂಗ್ ಮತ್ತು ಹಣಕಾಸು ವಲಯದ ನಿರ್ಣಾಯಕ ಪಾತ್ರದ ಕುರಿತು ಒತ್ತಿ ಹೇಳಿದರು.

**********

ಭಾರತ - ಪಾಕಿಸ್ತಾನ ಬಿಕ್ಕಟ್ಟು ಬೆನ್ನಲ್ಲೇ ದೇಶದ ರೈಲು ಕಾರ್ಯಾಚರಣೆಗಳಿಗಾಗಿ ಮಾಡಲಾದ ವ್ಯವಸ್ಥೆಗಳನ್ನು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ನಿನ್ನೆ ಪರಿಶೀಲಿಸಿದರು. ಗಡಿ ಪ್ರದೇಶಗಳಲ್ಲಿನ ಜನರಿಗೆ ಸಹಾಯ ಮಾಡಲು ವಿವಿಧ ಸರ್ಕಾರಿ ಸಂಸ್ಥೆಗಳೊಂದಿಗೆ ಸಮನ್ವಯ ಸಾಧಿಸಿ ರೈಲುಗಳ ಸಂಚಾರಕ್ಕೆ ವ್ಯವಸ್ಥೆ ಮಾಡುವಂತೆ ಸಚಿವ ಅಶ್ವಿನಿ ವೈಷ್ಣವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

*******END******